3. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗ ಪ್ರಮಾಣದ ಶೇಕಡಾ ಐವತ್ತಕ್ಕಿಂತ ಕಡಿಮೆ ಇಲ್ಲದಿರುವುದನ್ನು.

ಯಾವುದೇ ಒಂದು ಪ್ರದೇಶವು ತಾಲ್ಲೂಕ್ ಕೇಂದ್ರ ಸ್ಥಳವಾಗಿದ್ದಲ್ಲಿ ಅಂತಹ ಸ್ಥಳದ ಜನಸಂಖ್ಯೆಯು ಹತ್ತು ಸಾವಿರಕ್ಕಿಂತ ಕಡಿಮೆ ಇದ್ದಾಗ್ಯೂ ಸಹ, ರಾಜ್ಯಪಾಲರು ಅಂತಹ ಪ್ರದೇಶವನ್ನು ಪರಿವರ್ತಿತ ಪ್ರದೇಶವೆಂದು ಉದ್ಘೋಷಿಸಬಹುದಾಗಿದೆ.

ಇ) ಕಂದಾಯ ಇಲಾಖೆಯ ಆದೇಶ ಸಂಖ್ಯೆ ಆರ್‌ಡಿ 70 ಭೂದಪು 2009 ದಿನಾಂಕ: 24.12.2009 ರಲ್ಲಿ ಕರ್ನಾಟಕ ರಾಜ್ಯದಲ್ಲಿ 2011ರ ಜನಗಣತಿಯ ಕಾರ್ಯವು ಪ್ರಗತಿಯಲ್ಲಿರುವುದರಿಂದ ದಿನಾಂಕ: 31.03.2011ರವರೆಗೆ ಯಾವುದೇ ಪ್ರದೇಶವನ್ನು ಮೇಲ್ದರ್ಜೆಗೇರಿಸದಂತೆ ನಿರ್ಭಂದಿಸಲಾಗಿದೆ. ಆದ್ದರಿಂದ ದಿನಾಂಕ: 31.03.2010ರ ನಂತರ ಸದರಿ ವಿಷಯದ ಬಗ್ಗೆ ನಗರಾಭಿವೃದ್ಧಿ ಇಲಾಖೆಯು ಆರ್ಥಿಕ ಹಾಗೂ ಆಡಳಿತಾತ್ಮಕ ನಿರ್ಣಯವನ್ನು ತೆಗೆದುಕೊಳ್ಳಲಾಗುವುದು.

ದಕ್ಷಿಣ ಕನ್ನಡ ಜಿಲ್ಲೆಯ ವಾರ್ತಾ ಇಲಾಖೆಯ ಕಛೇರಿಗೆ ಮೂಲ ಸೌಲಭ್ಯದ ಕೊರತೆ

152 (449) ಶ್ರೀ ಖಾದರ್ ಯು.ಟ. (ಮಂಗಳೂರು) : ಮಾನ್ಯ ವಸತಿ, ವಾರ್ತಾ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿರುವ ವಾರ್ತಾ ಇಲಾಖೆಯ ಕಛೇರಿಗೆ ಅಗತ್ಯ ಮೂಲ ಸೌಲಭ್ಯಗಳು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಇದರಿಂದ ವಾರ್ತಾ ಇಲಾಖೆಯ ದೈನಂದಿನ ಚಟುವಟಿಕೆಗಳಿಗೆ ತೊಂದರೆ ಆಗಿದ್ದು, ಇದನ್ನು ಸರಿಪಡಿಸಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳಾವುವು (ವಿವರಗಳನ್ನು ಒದಗಿಸುವುದು);

ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ವಸತಿ, ವಾರ್ತಾ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು) :

ಅ) ಬಂದಿದೆ.

ಆ) ಈಗಾಗಲೇ ಮಂಗಳೂರು ವಾರ್ತಾ ಇಲಾಖೆ ಕಛೇರಿಗೆ ಕಂಪ್ಯೂಟರ್, ಫ್ಯಾಕ್ಸ್, ಟೆಲಿಫೋನ್‌ಗಳನ್ನು ಒದಗಿಸಲಾಗಿದೆ. ಅಗತ್ಯವಿರುವ ಸಿಬ್ಬಂದಿಯನ್ನು ಸಹ ತುಂಬಲಾಗಿದೆ. ಹಿರಿಯ ಸಹಾಯಕ ನಿರ್ದೇಶಕರ ಹುದ್ದೆ ಖಾಲಿ ಇದ್ದು, ಅದೇ ಕಛೇರಿಯ ಸಹಾಯಕ ನಿರ್ದೇಶಕರನ್ನು ಹೆಚ್ಚುವರಿ ಪ್ರಭಾರದಲ್ಲಿಡಲಾಗಿದೆ.

ಮಂಗಳೂರಿನ ವಾರ್ತಾ ಭವನದ ಕಟ್ಟಡದ ದುರಸ್ತಿ ಮತ್ತು ಮರು ವಿದ್ಯುದ್ದೀಕರಣ ಕಾಮಗಾರಿ ಸಂಬಂಧ 9.51ಲಕ್ಷ ರೂ.ಗಳ ಅಂದಾಜು ಪಟ್ಟಿಯನ್ನು ಲೋಕೋಪಯೋಗಿ ಇಲಾಖೆ – ಯವರು ವಾರ್ತಾ ಇಲಾಖೆಗೆ ದಿನಾಂಕ: 09–02–2010 ರಂದು ಸಲ್ಲಿಸಿರುತ್ತಾರೆ. 2009–10ನೇ ಸಾಲಿನಲ್ಲಿ ವಾರ್ತಾ ಇಲಾಖೆಯ ಮೇಲಣ ಬಂಡವಾಳ ವೆಚ್ಚದಡಿ ಅನುದಾನದ ಕೊರತೆ ಇರುವುದರಿಂದ 2010–11ನೇ ಸಾಲಿನಲ್ಲಿ ಈ ಕಾಮಗಾರಿಗೆ ತಗಲುವ ಅನುದಾನವನ್ನು ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಕಾನೂನು ನೆರವು ಸಮಿತಿಯ ಕಾರ್ಯವೈಖರಿ

153 (470) ಶ್ರೀ ಕಿಮ್ಮನೆ ರತ್ನಾಕರ್ (ತೀರ್ಥಹಳ್ಳಿ) : ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯದ ಕಾನೂನು ನೆರವು ಸಮಿತಿಯಿಂದ ಎಷ್ಟು ಜನ ಬಡವರು ಪ್ರತಿಫಲ ಪಡೆದವರ ವಿವರ ನೀಡುವುದು;

ಆ) ಕಳೆದ ಒಂದು ವರ್ಷದಲ್ಲಿ ಕಾನೂನು ನೆರವು ಪ್ರಾಧಿಕಾರದಿಂದ ಎಷ್ಟು ಜನಬಡವರು ನ್ಯಾಯ ಪಡೆದಿದ್ದಾರೆ ಮತ್ತು ಅರ್ಜಿ ಸಲ್ಲಿಸಿದ್ದಾರೆ;

ಇ) ಕಾನೂನು ನೆರವು ಸಮಿತಿಯ ರೂಪರೇಷೆಗಳನ್ನು ಬದಲಾಯಿಸುವ ಇರಾದೆ ಸರ್ಕಾರದ ಮುಂದೆ ಇದೆಯೇ;

ಈ) ಕಾನೂನು ಸೇವಾ ಪ್ರಾಧಿಕಾರವನ್ನು ಹೆಚ್ಚು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಸಾಧ್ಯವಿಲ್ಲವೆ?